# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು– 572 103.

**ದಿನಾಂಕ: 18.07.2024 ರಂದು ಮಧ್ಯಾಹ್ನ: 2:30 ಗಂಟೆಗೆ ನಡೆದ 2023–24ನೇ ಸಾಲಿನ ಆರನೇ ವಿಶೇಷ ಸಿಂಡಿಕೇಟ್ ಸಭೆಯ ನಡಾವಳಿಗಳು**

**ಹಾಜರಾದ ಸದಸ್ಯರುಗಳು**

| | | |
|---|---|---|
| 1. | ಪ್ರೊ. ವೆಂಕಟೇಶ್ವರಲು ಎಂ, ಮಾನ್ಯ ಕುಲಪತಿಗಳು | ಅಧ್ಯಕ್ಷರು |
| 2. | ಡಾ. ಮನೋಹರ್‌ಶಿಂಧೆ,<br>ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು | ಸದಸ್ಯರು |
| 3. | ಡಾ. ಕೆ ರಾಜೀವಲೋಚನ<br>ನಿವೃತ್ತ ತತ್ವಶಾಸ್ತ್ರ ಉಪನ್ಯಾಸಕರು, ಕೌಸ್ತುಭ 179, ದಾರುಕ ಬಡಾವಣೆ, ಜೋಗಿಮಟ್ಟಿರಸ್ತೆ, ಚಿತ್ರದುರ್ಗ–577501. | ಸದಸ್ಯರು |
| 4. | ಶ್ರೀ ಕೆ.ಆರ್‌ದೇವರಾಜ್<br>S/o ರಾಮಾಂಜಿನಪ್ಪ, ಮನೆ ಸಂಖ್ಯೆ: 202, ಹಳೆ ಅಂಚೆ ಕಚೇರಿ ರಸ್ತೆ, ಸೂಲಿಬೆಲೆ, ಹೊಸಕೋಟೆತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ–562 129 | ಸದಸ್ಯರು |
| 5. | ಶ್ರೀ ಕುಮಾರಸ್ವಾಮಿ ಹೆಚ್.ಬಿ.<br>ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ತಿಪಟೂರು, ತುಮಕೂರು ಜಿಲ್ಲೆ–572201 | ಸದಸ್ಯರು |
| 6. | ಪ್ರೊ. ರೇವಣಸಿದ್ದೇಶ್ವರ ಡಿ.ಆರ್.<br>ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಡವನಹಳ್ಳಿ, ಮಧುಗಿರಿ ತಾಲ್ಲೂಕು ತುಮಕೂರು ಜಿಲ್ಲೆ–572112 | ಸದಸ್ಯರು |
| 7. | ಡಾ. ಜಾಯ್ ನೆರೆಲ್ಲಾ<br>ಪ್ರಾಂಶುಪಾಲರು, ಯೂನಿಯನ್ ಕ್ರಿಶ್ಚಿಯನ್ ಕಾಲೇಜು, ಶಿರಾ ಗೇಟ್, ತುಮಕೂರು. | ಸದಸ್ಯರು |
| 8. | ಡಾ. ಕೊಟ್ರೇಶ್ ಎಂ.<br>ಪ್ರಾಧ್ಯಾಪಕರು, ಸ್ನಾತಕೋತ್ತರ ಇತಿಹಾಸ ಮತ್ತು ಪ್ರಾಕ್ತನಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು | ಸದಸ್ಯರು |
| 9. | ಪ್ರೊ. ಪ್ರಸನ್ನಕುಮಾರ್ ಕೆ.<br>ಕುಲಸಚಿವರು (ಮೌಲ್ಯಮಾಪನ) ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. | ಸದಸ್ಯರು |
| 10. | ಶ್ರೀಮತಿ ನಾಹಿದಾ ಜಮ್ ಜಮ್ ಕೆ.ಎ.ಎಸ್.<br>ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. | ಸದಸ್ಯ ಕಾರ್ಯದರ್ಶಿ |

**ಹಾಜರಾಗದ ಸದಸ್ಯರು**

| | | |
|---|---|---|
| 1. | ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ | ಸದಸ್ಯರು |
| 2. | ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ | ಸದಸ್ಯರು |
| 3. | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ | ಸದಸ್ಯರು |
| 4. | ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ | ಸದಸ್ಯರು |
| 5. | ಡಾ. ಚಿತ್ತರಂಜನ್ ರೈ,<br>ಪ್ರಾಂಶುಪಾಲರು, ಕಲ್ಪತರು ಪ್ರಥಮ ದರ್ಜೆ ವಿಜ್ಞಾನ ಕಾಲೇಜು, ಬಿ.ಹೆಚ್.ರಸ್ತೆ, ತಿಪಟೂರು, ತುಮಕೂರು ಜಿಲ್ಲೆ– 572201 | ಸದಸ್ಯರು |

ಪ್ರಸ್ತಾವನೆ:

ವಿಶ್ವವಿದ್ಯಾನಿಲಯದ ಮಾನ್ಯ ಕುಲಪತಿಗಳು ದಿನಾಂಕ:18.07.2024ರ ಗುರುವಾರ ಮಧ್ಯಾಹ್ನ: 2:30 ಗಂಟೆಗೆ ONLINE ಮುಖಾಂತರ ನಡೆದ 2023–24ನೇ ಸಾಲಿನ ಆರನೇ ವಿಶೇಷ ಸಿಂಡಿಕೇಟ್ ಸಭೆಗೆ ಹಾಜರಾದ ಎಲ್ಲಾ ಸದಸ್ಯರುಗಳನ್ನು ಆತ್ಮೀಯವಾಗಿ ಸ್ವಾಗತಿಸಿದರು, ತದನಂತರ ಸಭೆಯಲ್ಲಿ ಈ ಕೆಳಕಂಡ ಕಾರ್ಯಸೂಚಿಯ ಬಗ್ಗೆ ಚರ್ಚಿಸಿ ನಿರ್ಣಯವನ್ನು ಕೈಗೊಳ್ಳಲಾಯಿತು.

| ಕ್ರಮ ಸಂಖ್ಯೆ: | ಕಾರ್ಯಸೂಚಿ | ನಿರ್ಣಯ |
|---|---|---|
| 01 | ತುಮಕೂರು ವಿಶ್ವವಿದ್ಯಾನಿಲಯದ 17ನೇ ಘಟಿಕೋತ್ಸವ ಸಂಬಂಧ ಗೌರವ ಡಾಕ್ಟರೇಟ್ ಪ್ರದಾನ ಮಾಡುವ ಕುರಿತು | ತುಮಕೂರು ವಿಶ್ವವಿದ್ಯಾನಿಲಯದ 17ನೇ ಘಟಿಕೋತ್ಸವದಲ್ಲಿ ನೀಡಲಾಗುವ ಗೌರವ ಡಾಕ್ಟರೇಟ್‌ಗೆ ಸಂಬಂಧಿಸಿದಂತೆ, ಶ್ರೀ ಶ್ರೀ ಶ್ರೀ ಜಗದ್ಗುರು ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿ, ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠ, ರಾಜನಹಳ್ಳಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರಿಂದ ಅರ್ಜಿ ಸ್ವೀಕೃತವಾಗಿರುವ ವಿಷಯವನ್ನು ಮಾನ್ಯ ಕುಲಪತಿಗಳು ಸಭೆಯ ಗಮನಕ್ಕೆ ತಂದರು, ಈ ಕುರಿತು ಕೂಲಂಕಷವಾಗಿ ಚರ್ಚಿಸಿದ ಸಿಂಡಿಕೇಟ್ ಸಭೆಯು ಶ್ರೀ ಶ್ರೀ ಶ್ರೀ ಜಗದ್ಗುರು ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿ, ಇವರನ್ನು ಗೌರವ ಡಾಕ್ಟರೇಟ್ ಪ್ರಧಾನ ಮಾಡುವ ಅನುಮೋದಿತ ಪಟ್ಟಿಗೆ ಸೇರ್ಪಡಿಸಿ, ತಜ್ಞರ ಪರಿಶೀಲನಾ ಸಮಿತಿಗೆ ಮಂಡಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

## ಅಧ್ಯಕ್ಷಕರ ಅಪ್ಪಣೆ ಮೇರೆಗೆ ಚರ್ಚಿಸಿದ ಇತರೆ ವಿಷಯಗಳು

ತುಮಕೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಸಂಯೋಜಿತ ಬಿ.ಇಡಿ. ಶಿಕ್ಷಣ ಮಹಾವಿದ್ಯಾಲಗಳ ಪರೀಕ್ಷಾ ಕೇಂದ್ರಗಳಲ್ಲಿ ಕಡ್ಡಾಯವಾಗಿ CCTV ಗಳನ್ನು ಅಳವಡಿಸಿಕೊಳ್ಳುವ ಕುರಿತ ಪ್ರಸ್ತಾವನೆಯನ್ನು ಮಾನ್ಯ ಕುಲಪತಿಗಳು ಸಭೆಯ ಗಮನಕ್ಕೆ ತಂದರು, ಈ ಕುರಿತು ಕೂಲಂಕಷವಾಗಿ ಚರ್ಚಿಸಿದ ಸಭೆಯು ಮುಂಬರುವ ಜುಲೈ / ಆಗಸ್ಟ್ 2024ರ ಪರೀಕ್ಷೆಗಳು ಪ್ರಾರಂಭವಾಗುವುದಕ್ಕಿಂತ ಮುಂಚಿತವಾಗಿ ಬಿ.ಇಡಿ. ಶಿಕ್ಷಣ ಮಹಾವಿದ್ಯಾಲಗಳ ಪರೀಕ್ಷಾ ಕೇಂದ್ರಗಳಿಗೆ CCTV ಗಳನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಲು ಸಭೆಯು ಸರ್ವಾನುಮತದಿಂದ ತಿರ್ಮಾನಿಸಿತು.

ಮುಂದುವರೆದು, ಎಲ್ಲಾ ಬಿ.ಇಡಿ. ಶಿಕ್ಷಣ ಮಹಾವಿದ್ಯಾಲಯಗಳ ಪರೀಕ್ಷಾ ಕೇಂದ್ರಗಳಲ್ಲಿ CCTV ಗಳನ್ನು ಅಳವಡಿಸಿಕೊಂಡು ಪರೀಕ್ಷೆಗಳನ್ನು ನಡೆಸುವುದು ಹಾಗೂ CCTV ಗಳಲ್ಲಿ ಏನಾದರೂ ಲೋಪದೋಷಗಳುಂಟಾದರೆ ಸಂಬಂಧಿಸಿದ ಪ್ರಾಂಶುಪಾಲರು ಜವಾಬ್ದಾರಿಯನ್ನು ವಹಿಸಿಕೊಂಡು ಅಗತ್ಯ ಕ್ರಮಕೈಗೊಳ್ಳುವುದು ಮತ್ತು CCTV ದೃಶ್ಯಾವಳಿಗಳನ್ನು ವಿಶ್ವವಿದ್ಯಾನಿಲಯದಿಂದ ನೇರವಾಗಿ ವೀಕ್ಷಿಸುವ ಸಂಬಂಧ ವಿಶ್ವವಿದ್ಯಾನಿಲಯದಿಂದ ಕೇಂದ್ರೀಕೃತ ವ್ಯವಸ್ಥೆಯನ್ನು ಜಾರಿಗೆ ತರಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು.

| | | | |
|---|---|---|---|
| ಕುಲಸಚಿವರು (ಪರೀಕ್ಷಾಂಗ) | [signature] | ಡಾ. ಕೊಟ್ರೇಶ್ ಎಂ. | [signature] |
| ಡಾ. ಕೆ ರಾಜೀವಲೋಚನ | ಸಹಿ/- | ಡಾ. ಮನೋಹರ್‌ಶಿಂಧೆ, | [signature] |
| ಶ್ರೀ ಕೆ.ಆರ್ ದೇವರಾಜ್ | ಸಹಿ/- | ಪ್ರೊ. ರೇವಣಸಿದ್ದೇಶ್ವರ ಡಿ.ಆರ್. | [signature] |
| ಶ್ರೀ ಕುಮಾರಸ್ವಾಮಿ ಹೆಚ್.ಬಿ. | ಸಹಿ/- | ಡಾ. ಜಾಯ್ ನೆರೆಲ್ಲಾ | [signature] |

ಮಾನ್ಯ ಕುಲಸಚಿವರು

ಮಾನ್ಯ ಕುಲಪತಿಗಳು